# Akashvani : Bangalore
# National Bulletin In Kannada
# 21.03.2025 / 19.35 hrs
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು
## 21.03.2025 / 19.35 hrs

**<><*<><>*><>**

**ಮುಖ್ಯಾಂಶಗಳು**

**೧. ಒಂದು ಬಿಲಿಯನ್ ಟನ್ ಕಲ್ಲಿದ್ದಲು ಉತ್ಪಾದನೆಯ ಮೈಲಿಗಲ್ಲು ದಾಟಿದ ಭಾರತ- ಪ್ರಧಾನಮಂತ್ರಿ ನರೇಂದ್ರ ಮೋದಿ ಶ್ಲಾಘನೆ**

**೨. ಭಾರತದಲ್ಲಿ ೧೬೫ ಶತಕೋಟಿ ಡಾಲರ್ ಜೈವಿಕ ಆರ್ಥಿಕತೆಗೆ ನವೋದ್ಯಮಗಳ ಕೊಡುಗೆ**

**೩. ಜಮ್ಮು - ಕಾಶ್ಮೀರದಲ್ಲಿ ಭಯೋತ್ಪಾದನೆಯಿಂದ ಉಂಟಾದ ಸಾವುಗಳ ಪ್ರಮಾಣ ಶೇಕಡ ೭೦ ರಷ್ಟು ಇಳಿಕೆ - ಕೇಂದ್ರ ಗೃಹ ಸಚಿವ ಅಮಿತ್ ಶಾ**

**೪. ಕೇಂದ್ರ ಸಾಹಿತ್ಯ ಅಕಾಡೆಮಿ ಭಾಷಾಂತರ ಪ್ರಶಸ್ತಿಗೆ ಭಾಜನರಾದ ಕನ್ನಡದ ಸಿದ್ದಲಿಂಗ ಪಟ್ಟಣಶೆಟ್ಟಿ**

**<><*<><>*><>**

ಒಂದು ಬಿಲಿಯನ್ ಟನ್ ಕಲ್ಲಿದ್ದಲು ಉತ್ಪಾದನೆಯ ಮೈಲಿಗಲ್ಲನ್ನು ದಾಟಿದ ಭಾರತದ ಸಾಧನೆಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್ ಮಾಡಿರುವ ಪ್ರಧಾನಿ, ಇದು ಗಮನಾರ್ಹ ಸಾಧನೆ ಎಂದು ಬಣ್ಣಿಸಿದ್ದು, ಇಂಧನ ಭದ್ರತೆ, ಆರ್ಥಿಕ ಬೆಳವಣಿಗೆ ಮತ್ತು ಸ್ವಾವಲಂಬನೆಗೆ ಭಾರತದ ಭದ್ರತೆಯನ್ನು ತಿಳಿಸುತ್ತದೆ ಎಂದು ಹೇಳಿದ್ದಾರೆ. ಈ ಸಾಧನೆ ಕುರಿತು ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಖಾತೆ ಸಚಿವ ಜಿ.ಕಿಶನ್ ರೆಡ್ಡಿ, ಅತ್ಯಾಧುನಿಕ ತಂತ್ರಜ್ಞಾನಗಳು ಪರಿಣಾಮಕಾರಿ ವಿಧಾನಗಳೊಂದಿಗೆ ಭಾರತವು ಉತ್ಪಾದನೆಯನ್ನು ಹೆಚ್ಚಿಸಿದ್ದು, ಸುಸ್ಥಿರ ಮತ್ತು ಜವಾಬ್ದಾರಿಯುತ ಗಣಿಗಾರಿಕೆಯನ್ನು ಖಚಿತಪಡಿಸಿದೆ ಎಂದು ಮಾಹಿತಿ ನೀಡಿದ್ದಾರೆ. ಈ ಸಾಧನೆಯು ದೇಶದಲ್ಲಿ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆಯನ್ನು ಸಮರ್ಥವಾಗಿ ಎದುರಿಸಿ, ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುವ ಮೂಲಕ ನಾಗರಿಕರಿಗೆ ಉಜ್ವಲ ಭವಿಷ್ಯವನ್ನು ಖಚಿತಪಡಿಸುತ್ತದೆ ಎಂದು ಅವರು ಹೇಳಿದರು.

**<><*<><>*><>**

ಭಾರತದಲ್ಲಿ ಸುಮಾರು ೧೦ ಸಾವಿರ ಜೈವಿಕ ತಂತ್ರಜ್ಞಾನದ ನವೋದ್ಯಮಗಳು ಇದ್ದು, ಅಂದಾಜು ೧೬೫ ಶತಕೋಟಿ ಡಾಲರ್ ಜೈವಿಕ ಆರ್ಥಿಕತೆಗೆ ಕೊಡುಗೆ ನೀಡುತ್ತಿವೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ಇಂದು ೧೩ನೇ ಜೈವಿಕ ತಂತ್ರಜ್ಞಾನ ಉದ್ಯಮ ಸಂಶೋಧನಾ ಸಹಾಯ ಮಂಡಳಿಯ ಸಂಸ್ಥಾಪನಾ ದಿನಾಚಾರಣೆಯಲ್ಲಿ ಮಾತನಾಡಿದ ಅವರು, ಬಾಹ್ಯಾಕಾಶ ಮತ್ತು ಜೈವಿಕ ತಂತ್ರಜ್ಞಾನದಲ್ಲಿ ಭಾರತವು ಗಮನಾರ್ಹ ಪ್ರಗತಿ ಸಾಧಿಸಿದ್ದು, ಜಾಗತಿಕವಾಗಿ ಗುರುತಿಸಲ್ಪಡುತ್ತಿದೆ ಎಂದು ತಿಳಿಸಿದರು. ಇದೇ ವೇಳೆ ವಿಜ್ಞಾನ, ತಂತ್ರಜ್ಞಾನ ಮತ್ತು ಜೈವಿಕ ಆರ್ಥಿಕತೆಯನ್ನು ಮುನ್ನಡೆಸುವ ಸರ್ಕಾರದ ಬದ್ಧತೆಯನ್ನು ಅವರು ಪುನರುಚ್ಚರಿಸಿದರು. ಬಾಹ್ಯಾಕಾಶ ಔಷಧ ಕ್ಷೇತ್ರದಲ್ಲಿ ದೇಶದ ಪ್ರವರ್ತಕ ಪಾತ್ರವನ್ನು ಒತ್ತಿ ಹೇಳಿದ ಡಾ.ಜಿತೇಂದ್ರ ಸಿಂಗ್, ಈ ಅತ್ಯಾಧುನಿಕ ಕ್ಷೇತ್ರದಲ್ಲಿ ತೊಡಗಿಸಿಕೊಂಡ ರಾಷ್ಟ್ರಗಳಲ್ಲಿ ಭಾರತವು ಒಂದಾಗಿದೆ. ಇಸ್ರೋ ಜೊತೆಗಿನ ಜೈವಿಕ ತಂತ್ರಜ್ಞಾನ ಇಲಾಖೆಯ ಸಹಯೋಗವು ಒಂದು ಪ್ರಮುಖ ಮೈಲಿಗಲ್ಲಾಗಿದ್ದು, ಬಾಹ್ಯಾಕಾಶ ಔಷಧದ ಸಂಶೋಧನೆ ಮತ್ತು ನಾವೀನ್ಯತೆಯನ್ನು ಮುನ್ನಡೆಸುವಲ್ಲಿ ಸಹಯೋಗದ ಮಹತ್ವವನ್ನು ಅವರು ತಿಳಿಸಿದರು. ಕೋವಿಡ್ -೧೯ ಲಸಿಕೆಯ ಯಶಸ್ಸು ಸೇರಿದಂತೆ ಟಿಬಿ, ಮಲೇರಿಯಾ ಮತ್ತು ಹಿಮೋಫಿಲಿಯಾ ಲಸಿಕೆಗಳಲ್ಲಿನ ಪ್ರಗತಿಯಲ್ಲಿ ಭಾರತದ ಗಮನಾರ್ಹ ಜೈವಿಕ ತಂತ್ರಜ್ಞಾನ ಸಾಧನೆಗಳನ್ನು ಸಚಿವರು ಪ್ರದರ್ಶಿಸಿದರು, ಇದು ಜಾಗತಿಕ ಆರೋಗ್ಯ ರಕ್ಷಣೆಯಲ್ಲಿ ರಾಷ್ಟ್ರದ ಪ್ರಭಾವವನ್ನು ಮತ್ತಷ್ಟು

ಬಲಪಡಿಸುತ್ತದೆ. ಭಾರತ ಜೈವಿಕ ಆರ್ಥಿಕತೆ ವರದಿ-೨೦೨೫, ಬಯೋ ಸಾರ್ಥಿ ಮತ್ತು ಬಯೋಟೆಕ್ ನವೋದ್ಯಮಗಳಿಗೆ ಜಾಗತಿಕ ಮಾರ್ಗದರ್ಶನಕ್ಕಾಗಿ ಉಪಕ್ರಮವನ್ನು ಸಚಿವರು ಆರಂಭಿಸಿದರು. ಈ ವರದಿಯು ಜೈವಿಕ ತಂತ್ರಜ್ಞಾನ ಇಲಾಖೆ ಮತ್ತು ಜೈವಿಕ ತಂತ್ರಜ್ಞಾನ ಉದ್ಯಮ ಸಂಶೋಧನಾ ಸಹಾಯ ಮಂಡಳಿಯ ವಾರ್ಷಿಕ ಪ್ರಕಟಣೆಯಾಗಿದ್ದು, ಇದು ಭಾರತದ ಜೈವಿಕ ಆರ್ಥಿಕತೆಯ ಬೆಳವಣಿಗೆ ಮತ್ತು ಕಾರ್ಯಕ್ಷಮತೆ ಮೇಲೆ ನಿಗಾವಹಿಸುತ್ತದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಭಯೋತ್ಪಾದನೆಯ ಬಗ್ಗೆ ಶೂನ್ಯ ಸಹಿಷ್ಣುತೆ ನೀತಿಯನ್ನು ಹೊಂದಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ರಾಜ್ಯಸಭೆಯಲ್ಲಿಂದು ಗೃಹ ಸಚಿವಾಲಯದ ಕಾರ್ಯನಿರ್ವಹಣೆಯ ಕುರಿತಾದ ಚರ್ಚೆಗೆ ಉತ್ತರಿಸಿದ ಸಚಿವರು, ಎನ್‌ಡಿಎ ಸರ್ಕಾರದ ಅವಧಿಯಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದನೆಯಿಂದ ಉಂಟಾದ ಸಾವುಗಳು ಶೇಕಡ ೭೦ ರಷ್ಟು ಕಡಿಮೆಯಾಗಿದೆ ಮತ್ತು ಭಯೋತ್ಪಾದಕ ಘಟನೆಗಳು ಸಹ ತೀವ್ರವಾಗಿ ಕುಸಿದಿವೆ. ಕಳೆದ ಹತ್ತು ವರ್ಷಗಳಲ್ಲಿ, ಸರ್ಕಾರವು ರಾಜಕೀಯ ಇಚ್ಛಾಶಕ್ತಿ ಮತ್ತು ತಂತ್ರಜ್ಞಾನದ ಬಳಕೆಯ ಮೂಲಕ ರಾಷ್ಟ್ರದ ಭದ್ರತೆಯನ್ನು ಬಲಪಡಿಸಿದೆ ಎಂದು ಅವರು ತಿಳಿಸಿದರು. ದೇಶವು ಹಿಂದೆ ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದನೆ, ಎಡಪಂಥೀಯ ಉಗ್ರವಾದ ಮತ್ತು ಈಶಾನ್ಯದಲ್ಲಿ ದಂಗೆಯಂತಹ ಮೂರು ಪ್ರಮುಖ ಸವಾಲುಗಳನ್ನು ಎದುರಿಸಿದೆ. ದೇಶದ ಪ್ರಗತಿ ಮತ್ತು ಅಭಿವೃದ್ಧಿಗೆ ಅಡ್ಡಿಯಾಗಿದ್ದ ಈ ಎಲ್ಲಾ ಸವಾಲುಗಳನ್ನು ಸರ್ಕಾರ ದೃಢವಾಗಿ ನಿಭಾಯಿಸಿದೆ ಎಂದು ಅವರು ಹೇಳಿದರು. ೩೭೦ ನೇ ವಿಧಿಯನ್ನು ರದ್ದುಗೊಳಿಸುವ ಮೂಲಕ, ಪ್ರಧಾನಿ ಮೋದಿ ಸರ್ಕಾರವು 'ಒಂದು ಸಂವಿಧಾನ, ಒಂದು ಧ್ವಜ' ಎಂಬ ಸಂವಿಧಾನದ ನಿರ್ಮಾತೃಗಳ ಕನಸನ್ನು ನನಸಾಗಿಸಿತು. ಈ ಹಿಂದೆ, ಭಯೋತ್ಪಾದಕ ದಾಳಿಯ ನಂತರ ಯಾವುದೇ ಕ್ರಮ ಕೈಗೊಳ್ಳಲಾಗಿರಲಿಲ್ಲ ಮತ್ತು ಜನರು ಅವುಗಳನ್ನು ಮರೆತುಬಿಡುತ್ತಿದ್ದರು ಎಂದರು. ಉರಿ ಮತ್ತು ಪುಲ್ವಾಮಾದಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತ್ಯುತ್ತರವಾಗಿ ಹತ್ತು ದಿನಗಳಲ್ಲಿ ಭಾರತ ಪಾಕಿಸ್ತಾನದ ವಿರುದ್ಧ ಸರ್ಜಿಕಲ್ ಸ್ಟ್ರೈಕ್ ಮತ್ತು ವಾಯುದಾಳಿಗಳನ್ನು ನಡೆಸಿದೆ ಎಂದು ತಿಳಿಸಿದರು.

**ಧ್ವನಿ: ಅಮಿತ್ ಶಾ, ಗೃಹ ಸಚಿವ ( ೧೮ ಸೆಕೆಂಡ್‌ಗಳು)**

ಇದೇ ವೇಳೆ ದೇಶದ ಗಡಿಗಳು ಮತ್ತು ಆಂತರಿಕ ಭದ್ರತೆಯನ್ನು ಬಲಪಡಿಸಲು ಸರ್ವೋಚ್ಚ ತ್ಯಾಗ ಮಾಡಿದ ಸಾವಿರಾರು ರಾಜ್ಯ ಪೊಲೀಸರು ಮತ್ತು ಕೇಂದ್ರ ಅರೆಸೈನಿಕ ಪಡೆ ಸಿಬ್ಬಂದಿಗೆ ಗೃಹ ಸಚಿವರು ಕೃತಜ್ಞತೆ ವ್ಯಕ್ತಪಡಿಸಿದರು.

**<><*<><>*><>**

'ಜಲ ಜೀವನ್ ಮಿಷನ್ ಅಡಿ'ಯಲ್ಲಿ ಕೇಂದ್ರ ಸರ್ಕಾರ ದೇಶದ ೧೫ ಕೋಟಿ ೫೨ ಲಕ್ಷಕ್ಕೂ ಹೆಚ್ಚು ಗ್ರಾಮೀಣ ಕುಟುಂಬಗಳಿಗೆ ನಲ್ಲಿ ನೀರು ಸರಬರಾಜು ಮಾಡಿದೆ ಎಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ತಿಳಿಸಿದ್ದಾರೆ. ಲೋಕಸಭೆಯಲ್ಲಿ ಅನುದಾನದ ಬೇಡಿಕೆಗಳ ಮೇಲಿನ ಚರ್ಚೆಗೆ ಉತ್ತರಿಸಿದ ಸಚಿವರು, ೨೦೧೯ರಲ್ಲಿ 'ಜಲ ಜೀವನ್ ಮಿಷನ್' ಪ್ರಾರಂಭವಾದಾಗ ಸುಮಾರು ಮೂರು ಕೋಟಿ ಗ್ರಾಮೀಣ ಕುಟುಂಬಗಳು ಮಾತ್ರ ನಲ್ಲಿ ನೀರಿನ ಸಂಪರ್ಕ ಹೊಂದಿದ್ದವು ಎಂದು ಮಾಹಿತಿ ನೀಡಿದರು. ಇದುವರೆಗೆ ಐದು ಲಕ್ಷ ಹಳ್ಳಿಗಳ ೨೫ ಲಕ್ಷ ಮಹಿಳೆಯರಿಗೆ ಪರೀಕ್ಷಾ ಕಿಟ್ ಬಳಸಿಕೊಂಡು ನೀರಿನ ಮಾದರಿಗಳನ್ನು ಪರೀಕ್ಷಿಸಲು ತರಬೇತಿ ನೀಡಲಾಗಿದೆ. ದೇಶದ ಪ್ರತಿಯೊಂದು ಮನೆಗೆ ಸುರಕ್ಷಿತ ಮತ್ತು ಸಾಕಷ್ಟು ಕುಡಿಯುವ ನೀರನ್ನು ಪೂರೈಸಿದರೆ ವರ್ಷಕ್ಕೆ ಸುಮಾರು ೧ ಕೋಟಿ ೩೬ ಲಕ್ಷ ಮಕ್ಕಳ ಸಾವು ತಡೆಯಬಹುದು ಎಂದು ಸಚಿವರು ತಿಳಿಸಿದರು. ಇದಕ್ಕೂ ಮೊದಲು, ಚರ್ಚೆಯಲ್ಲಿ ಭಾಗವಹಿಸಿದ್ದ ಕಾಂಗ್ರೆಸ್‌ನ ರಾಬರ್ಟ್ ಬ್ರೂಸ್, ಜಲ ಜೀವನ್ ಮಿಷನ್ ಅಡಿಯಲ್ಲಿ, ಸರ್ಕಾರವು ೨೦೨೪ ರ ವೇಳೆಗೆ ಪ್ರತಿ ಗ್ರಾಮೀಣ ಮನೆಗೂ ನಲ್ಲಿ ನೀರಿನ ಸಂಪರ್ಕವನ್ನು ಒದಗಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.

**<><*<><>*><>**

ಕೇಂದ್ರ ಸಾಹಿತ್ಯ ಅಕಾಡೆಮಿ ಭಾಷಾಂತರ ಪ್ರಶಸ್ತಿ-೨೦೨೪ ಅನ್ನು ಘೋಷಿಸಿದ್ದು, ಸಂಸ್ಕೃತ ನಾಟಕವಾದ 'ಮಾಳವಿಕಾಗ್ನಿಮಿತ್ರಂ' ಅನ್ನು ಸಿದ್ದಲಿಂಗ ಪಟ್ಟಣ ಶೆಟ್ಟಿಯವರು ವಿಧಿಷ ಪ್ರಹಸನ ಎಂಬ ಶೀರ್ಷಿಕೆಯಡಿಯಲ್ಲಿ ಭಾಷಾಂತರಗೊಳಿಸಿದ್ದು, ಈ ಕೃತಿಯು ಭಾಷಾಂತರ ಪ್ರಶಸ್ತಿಗೆ ಭಾಜನವಾಗಿದೆ. ಡಾ.ನಾ.ದಾಮೋದರ ಶೆಟ್ಟಿ, ಪುಷ್ಪ.ಎಚ್.ಎಲ್, ಧರ್ಮೇಂದ್ರ ಕುರ್ಕುರಿ ಅವರು ಕನ್ನಡದ ವಿಭಾಗದ ತೀರ್ಪುಗಾರರಾಗಿದ್ದರು. ಕೊಂಕಣಿ ಭಾಷೆ ಅನುವಾದ ಪ್ರಶಸ್ತಿಗೆ ಮಿಲಿಂದ ಮ್ಹಾಮಲ್ ಅವರ ಭಾರತೀಯ ತತ್ವಗ್ಯಾನಾಚಿ ರೂಪ್ರೇಶಾ ಕೃತಿ ಆಯ್ಕೆಯಾಗಿದೆ.

<><*<><>*><>

೨೦೨೫ರ ಜನವರಿಯಿಂದ ಇಲ್ಲಿಯವರೆಗೆ ೩೮೮ ಭಾರತೀಯ ಪ್ರಜೆಗಳನ್ನು ಅಮೆರಿಕದಿಂದ ಭಾರತಕ್ಕೆ ಗಡೀಪಾರು ಮಾಡಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಲೋಕಸಭೆಯಲ್ಲಿ ಲಿಖಿತ ಉತ್ತರ ನೀಡಿದ್ದಾರೆ. ಫೆಬ್ರವರಿ ೫ ರಂದು ಅಮೃತಸರಕ್ಕೆ ಬಂದಿಳಿದ ವಿಮಾನದಲ್ಲಿ ಗಡೀಪಾರು ಮಾಡಲ್ಪಟ್ಟವರನ್ನು ನಡೆಸಿಕೊಂಡ ರೀತಿ ಹಾಗೂ ಮಹಿಳೆಯರಿಗೆ ಕೋಳ ಹಾಕಿರುವ ಅಮೆರಿಕ ಅಧಿಕಾರಿಗಳ ನಡೆಯನ್ನು ಭಾರತ ಖಂಡಿಸಿದೆ. ಗಡಿಪಾರು ಮಾಡಲ್ಪಟ್ಟವರನ್ನು ಮಾನವೀಯವಾಗಿ ನಡೆಸಿಕೊಳ್ಳುವ ಬಗ್ಗೆ ಕೇಂದ್ರ ಸರ್ಕಾರ ವಾಷಿಂಗ್ಟನ್‌ನೊಂದಿಗೆ ಸಂಪರ್ಕದಲ್ಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಇತ್ತೀಚೆಗೆ ಅಮೆರಿಕಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಅಕ್ರಮ ವಲಸೆ ಜಾಲಗಳನ್ನು ಹತ್ತಿಕ್ಕುವಾಗ ಸುರಕ್ಷಿತ ಹಾಗೂ ಕಾನೂನು ಬದ್ಧ ವಲಸೆಯನ್ನು ಉತ್ತೇಜಿಸುವ ಅಗತ್ಯವನ್ನು ಚರ್ಚಿಸಲಾಗಿದೆ ಎಂದು ಸಚಿವರು ಲೋಕಸಭೆಯಲ್ಲಿ ಮಾಹಿತಿ ನೀಡಿದ್ದಾರೆ.

<><*<><>*><>

೨೦೩೦ರಲ್ಲಿ ಗುಜರಾತಿನ ಅಹಮದಾಬಾದ್‌ನಲ್ಲಿ ಕಾಮನ್‌ವೆಲ್ತ್ ಕ್ರೀಡಾಕೂಟದ ಶತಮಾನದ ಆವೃತ್ತಿಯನ್ನು ಆಯೋಜಿಸಲು ಆಸಕ್ತಿಯ ಅಭಿವ್ಯಕ್ತಿಯನ್ನು ಸಲ್ಲಿಸುವ ಮೂಲಕ ಜಾಗತಿಕ ಕ್ರೀಡಾಕೂಟಗಳನ್ನು ಆಯೋಜಿಸುವತ್ತ ಭಾರತವು ಪ್ರಮುಖ ಹೆಜ್ಜೆಯನ್ನು ಇಟ್ಟಿದೆ. ಭಾರತದ ಕಾಮನ್‌ವೆಲ್ತ್ ಕ್ರೀಡೆಗಳ ಒಕ್ಕೂಟದ ಅಧ್ಯಕ್ಷೆ ಪಿ.ಟಿ.ಉಷಾ ನೇತೃತ್ವದಲ್ಲಿ ಹರಾಜು ಪ್ರಕ್ರಿಯೆಯಲ್ಲಿ ಪಾಲ್ಗೊಂಡು, ಕ್ರೀಡಾಕೂಟದ ಆಯೋಜನೆಗೆ ಅಹಮದಾಬಾದ್ ನಗರದ ಸಿದ್ಧತೆಯನ್ನು ಅವರು ಒತ್ತಿ ಹೇಳಿದರು. ಈ ಕ್ರಮವು ೨೦೩೬ರ ಒಲಿಂಪಿಕ್ ಕ್ರೀಡಾಕೂಟದ ಹರಾಜು ಸೇರಿದಂತೆ ಪ್ರಮುಖ ಅಂತಾರಾಷ್ಟ್ರೀಯ ಕ್ರೀಡಾಕೂಟಗಳನ್ನು ಸುರಕ್ಷಿತವಾಗಿ ಆಯೋಜಿಸುವ ಭಾರತದ ಮಹತ್ವಾಕಾಂಕ್ಷೆಯೊಂದಿಗೆ ಹೊಂದಾಣಿಕೆಯಾಗಲಿದೆ. ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜಿಸುವುದರಿಂದ ಕ್ರೀಡಾ ಆಡಳಿತದಲ್ಲಿ ಭಾರತದ ಸ್ಥಾನಮಾನವನ್ನು ಹೆಚ್ಚಿಸುವುದು ಮಾತ್ರವಲ್ಲದೇ, ಗಮನಾರ್ಹ ಆರ್ಥಿಕ ಪ್ರಯೋಜನಗಳನ್ನು ತರಲಿದೆ. ಕಾಮನ್‌ವೆಲ್ತ್ ಕ್ರೀಡೆಗಳ ಒಕ್ಕೂಟವು, ಭಾರತದ ಪ್ರಸ್ತಾವನೆಯನ್ನು ಸ್ವೀಕರಿಸಿದೆ ಎಂದು ಪಿ.ಟಿ.ಉಷಾ ಖಚಿತಪಡಿಸಿದ್ದಾರೆ. ೨೦೨೩ರಲ್ಲಿ ಐಸಿಸಿ ಪುರುಷರ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯನ್ನು ಭಾರತ ಯಶಸ್ವಿಯಾಗಿ ಆಯೋಜಿಸಿದ್ದನ್ನು ಇಲ್ಲಿ ನೆನೆಯಬಹುದಾಗಿದೆ.

<><*<><>*><>

ಸಾರ್ವಜನಿಕ ಗುತ್ತಿಗೆಗಳಲ್ಲಿ ಪ್ರವರ್ಗ ಬಿ ಸಮುದಾಯಕ್ಕೆ ಶೇಕಡಾ ೪ ರಷ್ಟು ಮೀಸಲಾತಿ ನೀಡುವ ವಿಧೇಯಕ ಸಂಬಂಧ ಕರ್ನಾಟಕ ವಿಧಾನಸಭೆಯಲ್ಲಿಂದು ಬಿಜೆಪಿ ನಾಯಕರು ಸದನದ ಬಾವಿಗಿಳಿದು ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಬಿಜೆಪಿ ಶಾಸಕರು ವಿಧೇಯಕದ ಪ್ರತಿಗಳನ್ನು ಹರಿದು, ವಿಧಾನಸಭಾಧ್ಯಕ್ಷರ ಮೇಲೆ ಕಾಗದದ ಚೂರುಗಳನ್ನು ಎಸೆದರು. ಮಧ್ಯಾಹ್ನ ಕಲಾಪ ಆರಂಭವಾಗುತ್ತಿದ್ದಂತೆ ಅಸಮಾಧಾನಗೊಂಡ ಸಭಾಧ್ಯಕ್ಷ ಯು.ಟಿ.ಖಾದರ್, ಸಭಾಧ್ಯಕ್ಷ ಪೀಠಕ್ಕೆ ಅಗೌರವ ತೋರಿದ ಆರೋಪದ ಮೇಲೆ ಬಿಜೆಪಿಯ ೧೮ ಶಾಸಕರನ್ನು ೬ ತಿಂಗಳ ಕಾಲ ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ. ಬಳಿಕ ಗದ್ದಲದ ನಡುವೆ ಸರಕಾರಿ ಕಾಮಗಾರಿಗಳ ಗುತ್ತಿಗೆಯಲ್ಲಿ ಅಲ್ಪಸಂಖ್ಯಾತರಿಗೆ ಶೇ.೪ರಷ್ಟು ಹಾಗೂ ಹಿಂದುಳಿದ ವರ್ಗಗಳಿಗೆ ಸರಕು ಮತ್ತು ಸೇವೆಗಳಲ್ಲಿ ಮೀಸಲಾತಿ ಕಲ್ಪಿಸುವ 'ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ತಿದ್ದುಪಡಿ ವಿಧೇಯಕ-೨೦೨೫ ಅನ್ನು ವಿಧಾನಸಭೆಯಲ್ಲಿ ಅಂಗೀಕಾರ ದೊರೆಯಿತು. ಬಳಿಕ ವಿಧಾನಸಭೆಯ ಕಾರ್ಯಕಲಾಪಗಳನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೬.೦೫ ಕ್ಕೆ <>*><>**